ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

27

ಇಲಾಖೆ / ವಿಷಯ : DEPARTMENT / SUBJECT: ಅಂತರ್ರಾಜ್ಯ ಗಡಿ ವಿವಾದ - ಬೆಳಗಾವಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 16/3/2021

# ಸಂಸತ್ತಿನಲ್ಲಿ ಗಡಿ ಕಿಚ್ಚು

16/3/21

## ಸೇನೆ ಸಂಸದರ ಪ್ರಸ್ತಾಪಕ್ಕೆ ಕೆರಳಿದ ರಾಜ್ಯದ ಸಂಸದರು

ನವದೆಹಲಿ: ಬೆಳಗಾವಿ ಗಡಿ ವಿಚಾರದಲ್ಲಿ ಮತ್ತೆ ಕ್ಯಾತೆ ತೆಗೆಯಲಾರಂಭಿಸಿರುವ ಶಿವಸೇನೆ, ಲೋಕಸಭೆಯಲ್ಲೂ ಈ ವಿಚಾರವನ್ನೆತ್ತಿ ಅನಗತ್ಯವಾಗಿ ಗದ್ದಲ ಎಬ್ಬಿಸಿದ ಘಟನೆ ಸೋಮವಾರ ನಡೆಯಿತು. ಬೆಳಗಾವಿಯಲ್ಲಿ ಮರಾಠಿಗರಿಗೆ ರಕ್ಷಣೆಯಿಲ್ಲ ಎಂದು ಹೇಳಿದ ಶಿವಸೇನೆ ಸಂಸದ ಅರವಿಂದ್ ಸಾವಂತ್ ಅವರಿಗೆ ಬಿಜೆಪಿ ಸಂಸದ ಶಿವಕುಮಾರ್ ಉದಾಸಿ ಸ್ಪಷ್ಟನೆ ನೀಡಿ ಬಾಯಿ ಮುಚ್ಚಿಸಿದರು.

ಶೂನ್ಯವೇಳೆಯಲ್ಲಿ ಈ ವಿಚಾರ ಎತ್ತಿದ ಶಿವಸೇನೆಯ ಸಂಸದ ಅರವಿಂದ್ ಸಾವಂತ್, ಬೆಳಗಾವಿಯಲ್ಲಿರುವ ಮರಾಠಿ ಭಾಷಿಗರಿಗೆ ರಕ್ಷಣೆಯೇ ಇಲ್ಲದಂತಾಗಿದೆ. ಸ್ವಾತಂತ್ರ್ಯ ಬಂದ ಬೆನ್ನಲ್ಲೇ ಎಲ್ಲಾ ಭಾಷಾವಾರು ಪ್ರಾಂತ್ಯಗಳನ್ನು ವಿಂಗಡಿಸಿ ಆಯಾ ಭಾಷಿಗರು ಇರುವ ಪ್ರಾಂತ್ಯಗಳನ್ನು ಒಗ್ಗೂಡಿಸಿ ರಾಜ್ಯಗಳನ್ನು ರಚಿಸಲಾಯಿತು. ಆಗ, ಬೆಳಗಾವಿ ಜಿಲ್ಲೆ ಕರ್ನಾಟಕಕ್ಕೆ ಸೇರ್ಪಡೆಗೊಂಡಿರಲಿಲ್ಲ. ಆನಂತರ ಅದನ್ನು ಕರ್ನಾಟಕಕ್ಕೆ ಸೇರಿಸಲಾಯಿತು ಎಂದು ಆರೋಪಿಸಿದರು. ಇದು, ಕರ್ನಾಟಕ ಸಂಸದರನ್ನು ಕೆರಳಿಸಿತು. ಉಭಯ ಪಕ್ಷಗಳ ಸಂಸದರ ನಡುವೆ ವಾಗ್ವಾದ ಏರ್ಪಟ್ಟಿತು. ಗದ್ದಲದ ನಡುವೆಯೇ ಮಾತನಾಡಿದ ಬಿಜೆಪಿ ಸಂಸದ ಶಿವಕುಮಾರ್ ಉದಾಸಿ, ಶಿವಸೇನೆಯು ಅಧಿಕಾರಕ್ಕಾಗಿ ತನ್ನ ಹಿಂದುತ್ವ ಸಿದ್ಧಾಂತವನ್ನೇ ಬದಿಗೊತ್ತಿತ್ತು. ಆ ವಿಚಾರವಾಗಿ ಜನರು ಶಿವಸೇನೆಯ ಮೇಲೆ ಅಸಮಾಧಾನಗೊಂಡಿದ್ದು, ಜನರ ಗಮನವನ್ನು ಬೇರೆಡೆಗೆ ಸೆಳೆಯುವ ಉದ್ದೇಶದಿಂದ ಆ ಪಕ್ಷ ಈಗ ಗಡಿ ಕ್ಯಾತೆ ತೆಗೆಯುತ್ತಿದೆ. ಆ ಕಾರಣಕ್ಕಾಗಿಯೇ, ಆ ಪಕ್ಷದ ಸಂಸದರು ಲೋಕಸಭೆಯಲ್ಲಿ ಗಡಿ ವಿಚಾರ ಎತ್ತುತ್ತಿದ್ದಾರೆ ಎಂದು ಟೀಕಿಸಿದರು.

"ಬೆಳಗಾವಿ ಗಡಿ ಸಮಸ್ಯೆಯು 1964ರ ಮಹಾಜನ್ ವರದಿಯ ಅನುಷ್ಠಾನದಿಂದಲೇ ನಿವಾರಣೆಯಾಗಿದೆ. ಈ ಮತ್ತೆ ಅದೇ ವಿಚಾರವನ್ನು ಕೆದಕುವ ಪ್ರಮೇಯವಿಲ್ಲ" ಎಂದು ಸ್ಪಷ್ಟಪಡಿಸಿದರು.